ಕರ್ನಾಟಕ ಸರ್ಕಾರದ ನಡವಳಿಗಳು

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು
19 MAR 2013
7968

ವಿಷಯ: ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರಿಗೆ ವೈಯಕ್ತಿಕ ಗಂಗಾ ಕಲ್ಯಾಣ ಯೋಜನೆಯಡಿ ಕನಿಷ್ಠ 02 ಎಕರೆ ಜಮೀನನ್ನು ಹೊಂದಿರಬೇಕೆಂಬ ನಿರ್ಬಂಧ ಸಡಿಲಿಸುವ ಬಗ್ಗೆ.

ಓದಲಾಗಿದೆ:
1) ಆದೇಶ ಸಂ:ಸಕಇ 168 BMS 2010 ದಿನಾಂಕ 25-07-2011
2) ಆದೇಶಸಂ:ಸಕಇ 91 ಎಸ್‌ಡಿಸಿ 2012 ದಿನಾಂಕ 02-07-2012

ಪ್ರಸ್ತಾವನೆ:

ಮೇಲೆ ಓದಲಾದ (1)ರ ಆದೇಶದಲ್ಲಿ ರಾಜ್ಯದ ಕರಾವಳಿ/ಮಲೆನಾಡು ಜಿಲ್ಲೆಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಪರಿಶಿಷ್ಟ.ಜಾತಿ/ಪರಿಶಿಷ್ಟ/ಪಂಗಡ ಮತ್ತು ಹಿಂದುಳಿದ ವರ್ಗಗಳ ಫಲಾನುಭವಿಗಳಿಗೆ ಕೊಳವೆ ಬಾವಿ ಮಂಜೂರು ಮಾಡಲು ಕನಿಷ್ಠ ಒಂದು ಎಕರೆ ಭೂಮಿ ಹೊಂದಿರಬೇಕೆಂದು ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಆದೇಶದಲ್ಲಿ ಪರಿಶಿಷ್ಟ.ಜಾತಿಯು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಸೌಲಭ್ಯಕ್ಕಾಗಿ ನಿಗಧಿಪಡಿಸಿರುವ ಜಮೀನಿನ ಕನಿಷ್ಠ ವಿಸ್ತೀರ್ಣದ ಮಿತಿಯನ್ನು ರಾಜ್ಯದ ಇತರೆ ಭಾಗಗಳಲ್ಲಿ 2.00 ಎಕರೆಯಿಂದ 1.20(ಒಂದು ಎಕರೆ ಇಪ್ಪತ್ತು ಗುಂಟೆ ಜಮೀನು) ಎಕರೆ ಎಂದು ನಿಗಧಿಪಡಿಸಿ ಆದೇಶಿಸಿದೆ.

ಶ್ರೀ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಮಂಡಳಿಯು ನಿರ್ದೇಶಕ ಮಂಡಳಿಯು 145ನೇ ಸಭೆಯ ನಡವಳಿ ದಿನಾಂಕ:30/08/2011ರಲ್ಲಿ ಹಿಂದುಳಿದ ವರ್ಗದಲ್ಲಿ ಒಳಪಡುವ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರಿಗೆ ವೈಯಕ್ತಿಕ ಗಂಗಾ ಕಲ್ಯಾಣ ಯೋಜನೆಯಡಿ ಕನಿಷ್ಠ 2 ಎಕರೆ ಜಮೀನು ಹೊಂದಿರುವ ನಿರ್ಬಂಧ ಸಡಿಲಿಸುವ ಬಗ್ಗೆ ತೀರ್ಮಾನಿಸಲಾಗಿರುತ್ತದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 454 ಬಿಎಂಎಸ್ 2012 ಬೆಂಗಳೂರು, ದಿನಾಂಕ:16-03-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರಿಗೆ ವೈಯಕ್ತಿಕ ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳಿಗೆ ಮೊದಲ ಹಂತದಲ್ಲಿ ಕನಿಷ್ಠ 2 ಎಕರೆ ಜಮೀನು ಹೊಂದಿರುವವರಿಗೆ ಯೋಜನೆ ಸೌಲಭ್ಯವನ್ನು ಪರಿಗಣಿಸಿ, ಒಂದು ವೇಳೆ ಅರ್ಹ ಫಲಾನುಭವಿಗಳು ದೊರೆಯದೇ ಇದ್ದಲ್ಲಿ ಕನಿಷ್ಠ ಒಂದು ಎಕರೆಯಿಂದ ಎರಡು ಎಕರೆ ಒಳಗೆ ಜಮೀನು ಹೊಂದಿರುವವರಿಗೆ ಸೌಲಭ್ಯ ನೀಡಲು ಅವಕಾಶ ಕಲ್ಪಿಸುವಂತೆ ಆದೇಶಿಸಲಾಗಿದೆ.

Important

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಎಂ.ಜಿ.ಮುಳಕೂರ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

XX impl Circular file 20.3.13 19/3/13

1) ಮಹಾಲೇಖಪಾಲರು,(ಎ ಮತ್ತು ಇ)(ಲೆಕ್ಕ ಪರಿಶೋಧನೆ -1 ಮತ್ತು 2) ಬೆಂಗಳೂರು.
2) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
3) ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.

4) ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ ಖಜಾನೆ ಬೆಂಗಳೂರು.
5) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ.
6) ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
7) ಎಲ್ಲಾ ಜಿಲ್ಲೆಯ ಖಜಾನಾಧಿಕಾರಿಗಳಿಗೆ.
(5–7: ವ.ನಿ.ಡಿ.ದೇ.ಅ.ಹಿಂ.ವ.ಅ. ನಿ.ನಿ. ಇವರ ಮುಖಾಂತರ)
8) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
9) ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ.
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.